ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು.

ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2021-22 ದಿನಾಂಕಃ 18.08.2021.

## ಸುತ್ತೋಲೆ

ವಿಷಯಃ ದಿನಾಂಕಃ 20.08.2021ರ ಶುಕ್ರವಾರದಂದು *"ಸದ್ಭಾವನ ದಿನ"* ವನ್ನಾಗಿ ಆಚರಿಸುವ ಬಗ್ಗೆ.

ಉಲ್ಲೇಖಃ ಸರ್ಕಾರದ ಪತ್ರ ಸಂಖ್ಯೆ:ಇಡಿ 77 ವಿವಿಧ 2021 ಬೆಂಗಳೂರು ದಿನಾಂಕ:17.08.2021.

********

ಸೂಚಿತ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ, ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ, ಹಿಂಸಾಚಾರವನ್ನು ತ್ಯಜಿಸುವಂತೆ ಮಾಡುವ ಉದ್ದೇಶದಿಂದ ಪ್ರತಿವರ್ಷ ಆಗಸ್ಟ್ 20 ರಂದು ಸದ್ಭಾವನ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಕೂಡ ಇದೇ ದಿನಾಂಕಃ20.08.2021ರ ಶುಕ್ರವಾರದಂದು *"ಸದ್ಭಾವನ ದಿನ"* ವನ್ನಾಗಿ ರಾಜ್ಯದಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದ್ದು, ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸಾಮಾಜಿಕ ಅಂತರವನ್ನು ಕಾಪಾಡಿಕೊಂಡು ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸುವಂತೆ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ), ಸಿ.ಆ.ಸು.ಇ. (ರಾಜಕೀಯ), ಕರ್ನಾಟಕ ಸರ್ಕಾರದ ಸಚಿವಾಲಯ, ವಿಧಾನಸೌಧ, ಬೆಂಗಳೂರು.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.

ಪು.ತಿ.ನೋ.

## ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.



Generated from eOffice by VIJAYASHREE HIREMATH, ED-GENA..., SENIOR ASSISTANT, EDUCATION HIGHER SE... PM